Telefax:0091-080-23330984
Email.registrar@uasbangalore.edu.in
Mob:9449866901

Phone:91-080-23330984
23330153 Extn.205/210

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**
**ಕುಲಸಚಿವರ ಕಛೇರಿ, ಜಿ.ಕೆ.ವಿ.ಕೆ., ಬೆಂಗಳೂರು -560 065.**

ಸಂಖ್ಯೆ:ಕು/ಸಕುಸ/ಹಿಸ-1/ಕೃಕೋ/2020-2021 ದಿನಾಂಕ: 24-09-2020

## ಅಧಿಸೂಚನೆ

**ಕರ್ನಾಟಕ ಕೃಷಿ/ ತೋಟಗಾರಿಕೆ / ಪಶು ಸಂಗೋಪನೆ ವಿಶ್ವ ವಿದ್ಯಾಲಯಗಳಲ್ಲಿ 2020-21ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗಳಿಗೆ ಆನ್‌ಲೈನ್ ಮೂಲಕ ಕೃಷಿಕರ ಕೋಟಾದಡಿಯಲ್ಲಿ ಪ್ರವೇಶಾತಿ ಮೂಲ ದಾಖಲಾತಿಗಳನ್ನು ಅಪ್‌ಲೋಡ್ ಮಾಡಲು ಮತ್ತೊಂದು ಅವಕಾಶ**

ಸಿಇಟಿ 2020ರಲ್ಲಿ ರ‍್ಯಾಂಕ್ ಪಡೆದು ಈಗಾಗಲೇ ಪ್ರಕಟಿಸಿರುವ ವೇಳಾಪಟ್ಟಿಯಂತೆ ದಿನಾಂಕ **29.08.2020**ರ ಒಳಗೆ ಕೃಷಿ ಕೋಟಾದಡಿ ಅರ್ಹತೆ ಪಡೆಯಲು ಮೂಲ ದಾಖಲೆಗಳನ್ನು ಅಪ್‌ಲೋಡ್ ಮಾಡದೇ ಇರುವ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ಕಲ್ಪಿಸಲಾಗಿದೆ. ಮುಂದುವರೆದು, ಈ ಮೇಲಿನ ದಿನಾಂಕದೊಳಗೆ ಮೂಲ ದಾಖಲೆಗಳನ್ನು ಅಪ್ ಲೋಡ್ ಮಾಡದೇ ಇರುವ ಅಭ್ಯರ್ಥಿಗಳು ದಿನಾಂಕ **25-09-2020 ರಿಂದ 29-09-2020 ಸಂಜೆ 5.00** ರ ಒಳಗೆ ಮೂಲ ದಾಖಲೆಗಳನ್ನು ಸಂಬಂಧಪಟ್ಟ ಕೃಷಿ / ತೋಟಗಾರಿಕೆ/ ಪಶು ಸಂಗೋಪನೆ ವಿಶ್ವ ವಿದ್ಯಾಲಯಗಳಲ್ಲಿ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಬಹುದಾಗಿದೆ. ಕೃಷಿ ಕೋಟಾದಡಿ ಪ್ರವೇಶಾತಿಗೆ ಸಂಬಂಧಿಸಿದ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಇದು ಅಂತಿಮ ಅವಕಾಶವಾಗಿರುತ್ತದೆ. ಈ ದಿನಾಂಕದ ನಂತರದಲ್ಲಿ ಯಾವುದೇ ಕಾರಣಕ್ಕಾಗಿ ವಿಸ್ತರಣೆ ಮಾಡಲಾಗುವುದಿಲ್ಲ.

ಈ ಮೊದಲು ಶುಲ್ಕ ಪಾವತಿಸಿ ಕೃಷಿ ಕೋಟಾದಡಿ ಪ್ರವೇಶಾತಿಗೆ ಸಂಬಂಧಿಸಿದ ದಾಖಲೆಗಳನ್ನು ಅಪ್‌ಲೋಡ್ ಮಾಡಿ ಅನರ್ಹರಾದ ಅಭ್ಯರ್ಥಿಗಳಿಗೂ ಮತ್ತೊಂದು ಅವಕಾಶ ನೀಡಲಾಗಿದೆ. ಅವರು ಸಂಬಂಧಪಟ್ಟ ಆಯಾ ಕೃಷಿ ವಿಶ್ವವಿದ್ಯಾಲಯಗಳ ಪರಿಶೀಲನಾ ಕೇಂದ್ರಗಳಿಗೆ ಸರಿಯಾದ ದಾಖಲೆಗಳ ಸಹಿತ ಖುದ್ದಾಗಿ ಸಲ್ಲಿಸಿ ಪರಿಶೀಲಿಸಿಕೊಳ್ಳಲು ತಿಳಿಸಲಾಗಿದೆ.

ಕುಲಸಚಿವರು, ಕೃವಿವಿ, ಬೆಂಗಳೂರು

ಕುಲಸಚಿವರು
ಕೃಷಿ ವಿಶ್ವವಿದ್ಯಾನಿಲಯ
ಗಾ. ಕೃ.ವಿ.ಕೆ., ಬೆಂಗಳೂರು-560 065